# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯು ದಿನಾಂಕ: 14-12-2016 ರಂದು ಬೆಳಿಗ್ಗೆ 11.00 ಗಂಟೆಗೆ ಪಶ್ಚಿಮ ವಲಯ ಕಛೇರಿಯಲ್ಲಿ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | |
|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು |
| 2. | ಸವಿತಾ ವಿ.ಕೃಷ್ಣ | – ಸದಸ್ಯರು |
| 3. | ಎನ್.ಉಮಾ | – ಸದಸ್ಯರು |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು |
| 5. | ಜಿ.ಬಾಲಕೃಷ್ಣನ್ | – ಸದಸ್ಯರು |
| 6. | ವಿ.ಸುರೇಶ್ | – ಸದಸ್ಯರು |
| 7. | ಹೆಚ್.ಕುಸುಮಾ | – ಸದಸ್ಯರು |
| 8. | ಎಂ.ಮಾಲತಿ | – ಸದಸ್ಯರು |
| 9. | ಎಂ.ಶಾಮಲ | – ಸದಸ್ಯರು |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು |

**ಹಾಜರಿದ್ದ ಅಧಿಕಾರಿಗಳು**

ಜಂಟಿ ಆಯುಕ್ತರು (ಪಶ್ಚಿಮ)
ಉಪ ಆಯುಕ್ತರು (ಪಶ್ಚಿಮ)
ಸ.ನಿ.ಹಣಕಾಸು-ಪಶ್ಚಿಮ
ಕಂದಾಯ ಅಧಿಕಾರಿ (ಚಾಮರಾಜಪೇಟೆ)
ಎ.ಸಿ.ಆಡಿಟ್ ಸೆಲ್
ಅಧೀಕ್ಷಕ ಅಭಿಯಂತರರು(ಪಶ್ಚಿಮ)
ಸಂಬಂಧಪಟ್ಟ ಎಲ್ಲಾ ಸಹ ಕಂದಾಯ ಅಧಿಕಾರಿಗಳು
ತೋಟಗಾರಿಕಾ ಅಧೀಕ್ಷಕರು (ಪಶ್ಚಿಮ)
ಆರೋಗ್ಯ ಅಧಿಕಾರಿಗಳು (ಪಶ್ಚಿಮ)

ಮೊದಲಿಗೆ ಪಶ್ಚಿಮ ವಲಯ ಜಂಟಿ ಆಯುಕ್ತರವರು ಸಭೆಯಲ್ಲಿ ಹಾಜರಿದ್ದ ಸಮಿತಿಯ ಅಧ್ಯಕ್ಷರು, ಸದಸ್ಯರುಗಳಿಗೆ ಮತ್ತು ಅಧಿಕಾರಿಗಳಿಗೆ ಸ್ವಾಗತ ಕೋರಿ, ತಮ್ಮ ಪರಿಚಯವನ್ನು ಮಾಡಿಕೊಂಡು ನಂತರ ಸಮಿತಿಯ ಸದಸ್ಯರುಗಳು ಮತ್ತು ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಳ್ಳುವಂತೆ ಕೋರಿದರು. ಅದರಂತೆ, ಹಾಜರಿದ್ದ ಸಮಿತಿಯ ಅಧ್ಯಕ್ಷರು, ಸದಸ್ಯರುಗಳು ಹಾಗೂ ಎಲ್ಲಾ ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ ಪಶ್ಚಿಮ ವಲಯಕ್ಕೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ ಇದುವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಚರ್ಚಿಸುವ ಸಲುವಾಗಿ ವಲಯ ಕಛೇರಿಯಲ್ಲಿ ಸಭೆಯನ್ನು ನಿಗಧಿಪಡಿಸಿ, ಸಮಿತಿಯು ಸಭೆಯ ತಿಳುವಳಿಕೆ ಪತ್ರವನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿ ಮಾಡಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಿರುವಂತೆ ಕಳುಹಿಸಲಾಗಿದ್ದರೂ, ಕೆಲವು ಅಧಿಕಾರಿಗಳು ಸಭೆಗೆ ಹಾಜರಾಗದೆ ಸಮಿತಿಗೆ ಅಗೌರವ

ತೋರಿರುತ್ತಾರೆಂದು  ಅಸಮಾಧಾನ ವ್ಯಕ್ತಪಡಿಸಿ, ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ನೋಟೀಸು ಜಾರಿ ಮಾಡುವಂತೆ ಆಯುಕ್ತರಿಗೆ ಶಿಫಾರಸ್ಸು ಮಾಡುವುದಾಗಿ ತಿಳಿಸಿದರು.

ನಂತರ ಆಡಿಟ್ ಸೆಲ್ ವಿಭಾಗದ ಆಡಿಟ್ ಅಧಿಕಾರಿ ರವರು ಮಾತನಾಡುತ್ತಾ, ಪಾಲಿಕೆಯ ವ್ಯಾಪ್ತಿಯ ವಿವಿಧ ಕಛೇರಿಗಳಲ್ಲಿನ ವಾರ್ಷಿಕ ವರದಿಯಲ್ಲಿ ಬಾಕಿ ಇರುವ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಸಂಬಂಧಿಸಿದಂತೆ  1995–96ನೇ ಸಾಲಿನಿಂದ 2013–14ನೇ ಸಾಲಿನವರೆಗೆ ಒಟ್ಟು 15662 ಕಂಡಿಕೆಗಳು ಬಾಕಿ ಇದ್ದು, ಸಮಿತಿಯು 2006–07ನೇ ಸಾಲಿನಿಂದ ತಹಲ್‌ವರೆಗಿನ ಲೆಕ್ಕಪರಿಶೋಧನಾ ವರದಿಯನ್ನು ಪರಿಶೀಲಿಸಲು ತೀರ್ಮಾನಿಸಿದ್ದು,  ಪಶ್ಚಿಮ ವಲಯಕ್ಕೆ ಸಂಬಂಧಿಸಿದಂತೆ ಬಾಕಿ ಇರುವ ಕಂಡಿಕೆಗಳು,  ಆಕ್ಷೇಪಣೆ ಮೊತ್ತ ಮತ್ತು ತೀರುವಳಿಗಳ ಬಗ್ಗೆ ಸಭೆಗೆ ಮಾಹಿತಿ ನೀಡುತ್ತಾ, ಬಾಕಿ ಇರುವ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ಸಿಬ್ಬಂದಿಗಳಿಗೆ ತಿಳಿಸಿದರು.

ಮುಂದುವರಿದು ಅಧ್ಯಕ್ಷರು ಮಾತನಾಡುತ್ತಾ ಈಗಾಗಲೇ ಸಮಿತಿಯು 7 ವಲಯಗಳ ಸಭೆಯನ್ನು ನಡೆಸಿದ್ದು, ಲೆಕ್ಕ ಪರಿಶೋಧನಾ ವರದಿಯಲ್ಲಿ ಹಲವಾರು ನ್ಯೂನತೆಗಳು ಕಂಡುಬಂದಿದ್ದು, ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿಗೆ ಸಂಬಂಧಿಸಿದಂತೆ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ, ಈ ಬಗ್ಗೆ ವಲಯದಲ್ಲಿ ಎಷ್ಟು ಸಭೆಗಳನ್ನು ನಡೆಸಲಾಗಿದೆ ಈ ಕುರಿತು ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಜಂಟಿ ಆಯುಕ್ತರವರಿಗೆ ಸೂಚಿಸಿದರು.

ಆಗ ಜಂಟಿ ಆಯುಕ್ತರು (ಪಶ್ಚಿಮ) ರವರು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿಯ ಬಗ್ಗೆ ವಲಯ ಮಟ್ಟದಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ಯಾವುದೇ ಸಭೆಯನ್ನು ನಡೆಸಿರುವುದಿಲ್ಲವೆಂದು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು, ಈ ಬಗ್ಗೆ ವಲಯ ಮಟ್ಟದಲ್ಲಿ ಅಧಿಕಾರಿಗಳೊಂದಿಗೆ ಪ್ರತಿ ಮಾಹೆ ಸಭೆಯನ್ನು ನಿಗಧಿಪಡಿಸಿ ಚರ್ಚಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗುವುದೆಂದು ಹಾಗೂ ಕೈಗೊಂಡ ಕ್ರಮದ ವರದಿಯನ್ನು ನಡವಳಿಯೊಂದಿಗೆ ಸಮಿತಿಗೆ ಸಲ್ಲಿಸುವುದಾಗಿ ತಿಳಿಸಿದರು.

ನಂತರ ಅಧ್ಯಕ್ಷರು, ಕೆ.ಎಂ.ಸಿ ಕಾಯ್ದೆ 440. 150ನೇ ಪ್ರಕರಣ ಮತ್ತು IX ನೇ ಅನುಸೂಚಿಯ ಪ್ರಕಾರ ಎಷ್ಟು ಪ್ರಕರಣಗಳಿಗೆ ಜುಲ್ಮಾನೆಯನ್ನು ವಿಧಿಸಲಾಗಿರುತ್ತದೆ ಎಂಬುದರ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ಸದರಿ ನಿಯಮದ ಅಡಿಯಲ್ಲಿ ಯಾವುದೇ ದಂಡವನ್ನು ವಿಧಿಸಿರುವುದಿಲ್ಲವೆಂದು, ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ ಅಗತ್ಯ ಕ್ರಮವನ್ನು ವಹಿಸಲಾಗುವುದೆಂದು ಉಪ ಆಯುಕ್ತರು ಸಭೆಗೆ ಮಾಹಿತಿ ನೀಡುತ್ತಾ, ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಹಾಗೂ ವಲಯ ಮಟ್ಟದಲ್ಲಿ ಈ ವಿಷಯದ ಕುರಿತು ಪ್ರತ್ಯೇಕ ಸಭೆಗಳನ್ನು ನಡೆಸಿ ಅಧೀನ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವುದಾಗಿ ತಿಳಿಸಿದರು.

ನಂತರ ವಲಯ ಸಹಾಯಕ ನಿಯಂತ್ರಕರು (ಹಣಕಾಸು) ರವರಿಗೆ ಅವರ ಕಛೇರಿಯ ಕಾರ್ಯವ್ಯಾಪ್ತಿಯ ಬಗ್ಗೆ ಸಭೆಗೆ ಮಾಹಿತಿ ನೀಡಲು ಸೂಚಿಸಲಾಗಿ, ಸದರಿಯವರು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ವಲಯ ವ್ಯಾಪ್ತಿಯ ಕಛೇರಿಗಳಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ಚರ್ಚಿಸಲು ಈಗಾಗಲೇ ಸಭೆಗಳನ್ನು ನಡೆಸಿರುವುದಾಗಿ ತಿಳಿಸಿದ್ದು, ಆದಾಗ್ಯೂ ಆಡಿಟ್ ವರದಿಗಳಿಗೆ ಸಮರ್ಪಕವಾಗಿ ಉತ್ತರಗಳನ್ನು ಸಲ್ಲಿಸುವಲ್ಲಿ ಅಧಿಕಾರಿ/ಸಿಬ್ಬಂದಿಗಳು ವಿಫಲರಾಗಿರುತ್ತಾರೆ, ಈ ನಿಟ್ಟಿನಲ್ಲಿ ಇನ್ನು ಮುಂದೆ ಸಕ್ರಿಯವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು. ಆಗ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ವಲಯ ಮಟ್ಟದಲ್ಲಿ ಸಭೆಗಳನ್ನು ನಡೆಸಿರುವ ಬಗ್ಗೆ ತಯಾರಿಸಿರುವ ನಡವಳಿಗಳನ್ನು ಸಲ್ಲಿಸಲು ಸೂಚಿಸಿದಾಗ, ಸಹಾಯಕ ನಿಯಂತ್ರಕರು ಸಭೆಯನ್ನು ನಡೆಸಿರುವ ಕುರಿತು ಯಾವುದೇ ನಡವಳಿಗಳನ್ನು ತಯಾರಿಸಿರುವುದಿಲ್ಲವೆಂದು, ಮುಂದಿನ ದಿನಗಳಲ್ಲಿ ವಲಯ ವ್ಯಾಪ್ತಿಯಲ್ಲಿ ಸಭೆಯನ್ನು ನಡೆಸಿ ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಸಭೆಯ ನಡವಳಿಗಳೊಂದಿಗೆ ಸಲ್ಲಿಸುವುದಾಗಿ ಹಾಗೂ ಇನ್ನು ಮುಂದೆ ಪ್ರತಿ ತಿಂಗಳಿಗೊಮ್ಮೆ ಲೆಕ್ಕ ಪರಿಶೋಧನಾ ವರದಿಗಳಿಗೆ ಸಂಬಂಧಿಸಿದಂತೆ ಸಭೆಯನ್ನು ನಡೆಸುವುದಾಗಿ ಮತ್ತು ಲೆಕ್ಕ ಪರಿಶೋಧನಾ ವರದಿಗಳಿಗೆ ಸೂಕ್ತ ಕ್ರಮ ಕೈಗೊಳ್ಳದ ಅಧಿಕಾರಿ/ಸಿಬ್ಬಂದಿಗಳಿಗೆ ನೋಟೀಸ್ ಜಾರಿ ಮಾಡುವುದಾಗಿ ಇಲ್ಲವಾದಲ್ಲಿ ವೇತನವನ್ನು ತಡೆಹಿಡಿಯುವುದಾಗಿ ತಿಳಿಸಿದರು.

ಆಗ ಅಧ್ಯಕ್ಷರು ಸಹಾಯಕ ನಿಯಂತ್ರಕರು ಹಣಕಾಸು ರವರು ವಲಯ ವ್ಯಾಪ್ತಿಯ ವಿವಿಧ ಕಛೇರಿಗಳ ಯಾವುದೇ ಬಿಲ್‌ಗಳನ್ನು ಪಾವತಿಸುವ ಮುಂಚಿತವಾಗಿ ಸದರಿ ಕಛೇರಿಯವರು ಲೆಕ್ಕ ಪರಿಶೋಧನಾ

ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡು ಬಿಲ್‌ಗಳನ್ನು ಪಾವತಿಸುವಂತೆ ಕ್ರಮವಹಿಸಬೇಕೆಂದು ಸೂಚಿಸಿದರು.

ಮುಂದುವರಿದು ಪಶ್ಚಿಮ ವಲಯ ವ್ಯಾಪ್ತಿಯ ಸಹಾಯಕ ಕಂದಾಯ ಅಧಿಕಾರಿಗಳ ಕಛೇರಿಗಳಿಂದ ಹಾಜರಿದ್ದ ಅಧಿಕಾರಿಗಳು ಅವರವರ ಕಛೇರಿಗಳಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಬಾಕಿ ಇರುವ ಕಂಡಿಕೆ, ಆಕ್ಷೇಪಣೆ ಹಾಗೂ ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಲು ಅಗತ್ಯ ಕ್ರಮಗಳನ್ನು ಕೈಗೊಂಡಿರುವುದಾಗಿ ತಿಳಿಸಿದರು. ಆಗ ಅಧ್ಯಕ್ಷರು ಹಾಜರಿದ್ದ ಸಹ ಕಂದಾಯ ಅಧಿಕಾರಿಗಳಿಗೆ ಅವರವರ ಕಛೇರಿಗಳಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳಿಗೆ ಉತ್ತರಗಳನ್ನು ತಯಾರಿಸಿ, ಆಕ್ಷೇಪಣೆ ಮತ್ತು ವಸೂಲಾತಿಗೆ ಸೂಚಿಸಲಾಗಿರುವ ಮೊತ್ತವನ್ನು ವಸೂಲು ಮಾಡಲು ಕೂಡಲೇ ಕ್ರಮವಹಿಸಬೇಕೆಂದು, ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ಅಧಿಕಾರಿಗಳು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕೆಂದು ಸೂಚಿಸಿದರು.

ನಂತರ ಸಭೆಯಲ್ಲಿ ಹಾಜರಿದ್ದ ತೋಟಗಾರಿಕಾ ಅಧೀಕ್ಷಕರು (ಪಶ್ಚಿಮ) ರವರಿಗೆ ಅವರ ಕಛೇರಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಸದರಿಯವರು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿಗೆ ಸಂಬಂಧಿಸಿದಂತೆ ಈಗಾಗಲೇ ಸೂಕ್ತ ಕ್ರಮ ಕೈಗೊಂಡಿರುವುದಾಗಿ ತಿಳಿಸಿದರು. ಆಗ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ತೋಟಗಾರಿಕಾ ಅಧೀಕ್ಷಕರವರ ಕಛೇರಿಯಿಂದ ನಿರ್ವಹಣೆ ಮಾಡುತ್ತಿರುವ ಉದ್ಯಾನವನಗಳ ವಿವರ, ಅವುಗಳ ನಿರ್ವಹಣೆಗೆ ಸಂಬಂಧಪಟ್ಟ ಸಂಪೂರ್ಣ ಕಡತಗಳನ್ನು ಸಮಿತಿಗೆ ಪರಿಶೀಲನೆಗೆ ತರಲು ಸೂಚಿಸಿದರು.

ಮುಂದುವರಿದು ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ಮಾತನಾಡುತ್ತಾ ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ಎಸ್.ಎ.ಎಸ್ ಯೋಜನೆ ಅಡಿಯಲ್ಲಿ ಎಷ್ಟು ಸ್ವತ್ತುಗಳು ನೊಂದಣಿಯಾಗಿರುತ್ತದೆ. ಈ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡಲು ಹಾಗೂ ಸಂಬಂಧಪಟ್ಟ ವಾರ್ಡ್‌ಗಳ ಕರ ವಸೂಲಿಗಾರರು ಹಾಗೂ ಕಂದಾಯ ಪರಿವೀಕ್ಷಕರುಗಳು ಪ್ರತಿ ದಿನ ಕನಿಷ್ಟ 25 ಸ್ವತ್ತುಗಳನ್ನು ತಪಾಸಣೆ ಮಾಡಬೇಕೆಂಬ

ನಿಯಮವಿದ್ದು, ಈ ಬಗ್ಗೆ ವಿವರಗಳನ್ನು ನೀಡಲು ಹಾಜರಿದ್ದ ಸಹ ಕಂದಾಯ ಅಧಿಕಾರಿಗಳಿಗೆ ಸೂಚಿಸಿದಾಗ, ಹಾಜರಿದ್ದ ಅಧಿಕಾರಿಗಳು ಈ ಬಗ್ಗೆ ಸ್ಪಷ್ಟ ಮಾಹಿತಿಯನ್ನು ನೀಡುವಲ್ಲಿ ವಿಫಲರಾಗಿರುತ್ತಾರೆ. ಆಗ ಸದಸ್ಯರು ಸಹ ಕಂದಾಯ ಅಧಿಕಾರಿಗಳು ತಮ್ಮ ಅಧೀನದ ಕರ ವಸೂಲಿಗಾರರು ಮತ್ತು ಕಂದಾಯ ಪರಿವೀಕ್ಷಕರುಗಳು ನಿಯಮಾನುಸಾರ ಕರ್ತವ್ಯವನ್ನು ನಿರ್ವಹಿಸುವಂತೆ ನಿರ್ದೇಶನ ನೀಡಬೇಕೆಂದು ಸೂಚಿಸಿದರು.

ನಂತರ ಕಾಮಗಾರಿ ವಿಭಾಗಕ್ಕೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮದ ಮಾಹಿತಿಯನ್ನು ಸಲ್ಲಿಸಲು ಸೂಚಿಸಿದಾಗ, ಸದರಿಯವರು ಕಾಮಗಾರಿ ಇಲಾಖೆ ಅಭಿಯಂತರರುಗಳಿಗೆ ಈ ಬಗ್ಗೆ ಸೂಕ್ತ ಕ್ರಮ ವಹಿಸಲು ಹಾಗೂ ಕೈಗೊಂಡಿರುವ ಕ್ರಮದ ವಿವರವಾದ ವರದಿಯನ್ನು ಸಮಿತಿಗೆ ಸಲ್ಲಿಸಲು ತಿಳಿಸುವುದಾಗಿ ಹೇಳಿದರು.

ನಂತರ ಆರೋಗ್ಯ ಇಲಾಖೆಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಆರೋಗ್ಯಾಧಿಕಾರಿಗಳು, ಆರೋಗ್ಯ ವಿಭಾಗದಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ ಮತ್ತು ವಸೂಲಾತಿಯ ಬಗ್ಗೆ ಈಗಾಗಲೇ ಕ್ರಮ ಕೈಗೊಂಡಿರುವುದಾಗಿ ತಿಳಿಸುತ್ತಾ ಪಾಲಿಕೆಯಲ್ಲಿ ಆನ್‌ಲೈನ್ ಮುಖಾಂತರ ಟ್ರೇಡ್ ಲೈಸನ್ಸ್ ಪಡೆಯುವ ಪದ್ಧತಿಯು ಜಾರಿಯಲ್ಲಿದ್ದು, ಈ ವ್ಯವಸ್ಥೆಯಲ್ಲಿ ಯಾವುದೇ ನಿರ್ದಿಷ್ಟ ನಿಯಮಗಳು ಇಲ್ಲದೆ ಇರುವುದರಿಂದ ಉದ್ದಿಮೆದಾರರು ಆನ್‌ಲೈನ್‌ನಲ್ಲಿ ತಪ್ಪಾಗಿ ವಿವರಗಳನ್ನು ನಮೂದಿಸಿ ಟ್ರೇಡ್ ಲೈಸನ್ಸ್ ಅನ್ನು ಸುಲಭವಾಗಿ ಪಡೆದುಕೊಳ್ಳುತ್ತಿರುತ್ತಾರೆಂದು, ಆನ್ ಲೈನ್ ಮುಖಾಂತರ ಎಷ್ಟು ಟ್ರೇಡ್ ಲೈಸನ್ಸ್‌ಗಳು ನೊಂದಣಿಯಾಗಿರುತ್ತದೆ ಎಂಬ ಬಗ್ಗೆ ಯಾವುದೇ ನಿಖರ ಮಾಹಿತಿಯು ಇರುವುದಿಲ್ಲವೆಂದು ಹಾಗೂ ಉದ್ದಿಮೆದಾರರುಗಳು ಅನಧಿಕೃತವಾಗಿ ವಾಣಿಜ್ಯ ಉದ್ದಿಮೆಗಳನ್ನು ನಡೆಸುತ್ತಿರುವುದಾಗಿಯು ತಿಳಿಸುತ್ತಾ ಆನ್‌ಲೈನ್ ಮುಖಾಂತರ ಟ್ರೇಡ್ ಲೈಸನ್ಸ್ ನೀಡುವ ವ್ಯವಸ್ಥೆಯಲ್ಲಿ ಕೆಲವೊಂದು ಮಾರ್ಪಾಡುಗಳನ್ನು ತರಬೇಕೆಂದು ಟ್ರೇಡ್ ಲೈಸನ್ಸ್ ಪಡೆಯಲು ಉದ್ದಿಮೆದಾರರು ತೆರಿಗೆ ಪಾವತಿಸಿರುವ ರಸೀದಿಯ ವಿವರಗಳನ್ನು ನಮೂದಿಸುವ ವ್ಯವಸ್ಥೆಯನ್ನು ಆನ್‌ಲೈನ್‌ನಲ್ಲಿ ಜಾರಿಗೆ ತಂದಲ್ಲಿ ಅಕ್ರಮಗಳನ್ನು ತಡೆಗಟ್ಟಬಹುದೆಂದು ತಿಳಿಸುತ್ತಾ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಕೋರಿದರು. ಆಗ ಅಧ್ಯಕ್ಷರು ಸದರಿ ವಿಷಯವನ್ನು ಮಾನ್ಯ ಆಯುಕ್ತರವರ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರುವುದಾಗಿ ತಿಳಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಎಲ್ಲಾ ಅದಿಕಾರಿ/ಸಿಬ್ಬಂದಿಗಳು ಸೂಕ್ತ ಕ್ರಮ ವಹಿಸಬೇಕೆಂದು ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕರ್ತವ್ಯವನ್ನು ನಿರ್ವಹಿಸಬೇಕೆಂದು ಅಲ್ಲದೆ ಲೆಕ್ಕ ಪರಿಶೋಧನಾ ವರದಿಗಳಿಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿಯು ಬೇಕಾದಲ್ಲಿ ಕೇಂದ್ರ ಕಛೇರಿಯ ಆಡಿಟ್ ಸೆಲ್ ವಿಭಾಗದಿಂದ ಪಡೆಯತಕ್ಕದ್ದೆಂದು ತಿಳಿಸುತ್ತಾ ಸಭೆಯನ್ನು ವಂದನೆಯೊಂದಿಗೆ ಮುಕ್ತಾಯಗೊಳಿಸಿದರು.

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಜಂಟಿ ಆಯುಕ್ತರು (ಪಶ್ಚಿಮ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
6.ಮುಖ್ಯ ಲೆಕ್ಕಾಧಿಕಾರಿಯವರ ಮಾಹಿತಿಗಾಗಿ
7.ಉಪ ಆಯುಕ್ತರು (ಪಶ್ಚಿಮ) ರವರಿಗೆ ಕಳುಹಿಸುತ್ತಾ, ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ
8.ಕಛೇರಿ ಕಡತಕ್ಕೆ